Akashvani : Bangalore
National Bulletin In Kannada
31.08.2024 :7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

*****

ಮುಖ್ಯಾಂಶಗಳು:

- ಮೂರು ವಂದೇ ಭಾರತ್ ರೈಲು ಸಂಚಾರಕ್ಕಿಂದು ಪ್ರಧಾನಿ ನರೇಂದ್ರ ಮೋದಿ ಅವರಿಂದ ಹಸಿರುನಿಶಾನೆ
- ಸೆಪ್ಟೆಂಬರ್ ೩ ರಿಂದ ಬ್ರೂನಿ, ಸಿಂಗಾಪುರ ದೇಶಗಳಿಗೆ ಪ್ರವಾಸ ಕೈಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ
- ಅಸ್ನಾ ಚಂಡಮಾರುತ; ಗುಜರಾತ್‌ನಲ್ಲಿ ಭಾರೀ ಮಳೆ, ಕರ್ನಾಟಕ ಸೇರಿದಂತೆ ವಿವಿಧೆಡೆ ಇಂದು ವರ್ಷಧಾರೆಯ ಮುನ್ಸೂಚನೆ
- ಪ್ಯಾರಿಸ್ ಪ್ಯಾರಾಲಿಂಪಿಕ್ಸ್; ಭಾರತಕ್ಕೆ ನಿನ್ನೆ ನಾಲ್ಕು ಪದಕ; ರಾಷ್ಟ್ರಪತಿ, ಪ್ರಧಾನಿ ಅಭಿನಂದನೆ

******

ಬೆಂಗಳೂರು-ಮದುರೈ ಮಾರ್ಗ ಸೇರಿದಂತೆ ಮೂರು ವಂದೇ ಭಾರತ್ ರೈಲು ಸಂಚಾರಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಹಸಿರುನಿಶಾನೆ ತೋರಲಿದ್ದಾರೆ. ಮೇಕ್ ಇನ್ ಇಂಡಿಯಾ ಮತ್ತು ಆತ್ಮನಿರ್ಭರ್ ಭಾರತ್ ಯೋಜನೆಗಳಡಿ ದೇಸಿ ನಿರ್ಮಿತ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಮೀರತ್-ಲಖನೌ, ಬೆಂಗಳೂರು-ಮದುರೈ ಮತ್ತು ಚೆನ್ನೈ-ನಾಗರಕೊಯಿಲ್ ನಿಲ್ದಾಣಗಳ ನಡುವೆ ಸಂಚರಿಸಲಿವೆ. ಈ ಮೂಲಕ ಕರ್ನಾಟಕ, ಉತ್ತರಪ್ರದೇಶ ಮತ್ತು ತಮಿಳುನಾಡು ರಾಜ್ಯಗಳ ಪ್ರಯಾಣಿಕರಿಗೆ ಅತ್ಯಾಧುನಿಕ ಮತ್ತು ಜಾಗತಿಕ ಶ್ರೇಣಿಯ ರೈಲು ಸೇವೆಗಳನ್ನು ಒದಗಿಸಲಾಗುತ್ತಿದೆ.

ಈ ಮೂರು ರೈಲುಗಳ ಸಂಚಾರದಿಂದ ಸಾಮಾನ್ಯ ಪ್ರಯಾಣಿಕರ ಜತೆಗೆ ವೃತ್ತಿಪರರು, ಉದ್ಯಮಿಗಳು ಹಾಗೂ ವಿದ್ಯಾರ್ಥಿ ಸಮುದಾಯಗಳಿಗೂ ಅನುಕೂಲವಾಗಲಿದೆ.

******

ಪ್ರಧಾನಿ ನರೇಂದ್ರ ಮೋದಿ ಅವರು, ಸೆಪ್ಟೆಂಬರ್ ೩ರಿಂದ ಬ್ರೂನಿ ಮತ್ತು ಸಿಂಗಾಪುರ ದೇಶಗಳಿಗೆ ಮೂರು ದಿನಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಬ್ರೂನಿ ಸುಲ್ತಾನ ಹಾಜಿ ಹಸನಲ್ ಬೋಲ್ಕಿಯಾ ಅವರ ಆಮಂತ್ರಣದ ಮೇರೆಗೆ ಪ್ರಧಾನಿ ಅವರು ಅಲ್ಲಿಗೆ ಭೇಟಿ ನೀಡುತ್ತಿದ್ದು, ಇದು ಆ ರಾಷ್ಟ್ರಕ್ಕೆ ಭಾರತದ ಪ್ರಧಾನಿಯೊಬ್ಬರ ಪ್ರಥಮ ಭೇಟಿಯಾಗಿದೆ ಎಂದು ವಿದೇಶಾಂಗ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ರಣಧೀರ್ ಜೈಸ್ವಾಲ್, ಭಾರತ ಮತ್ತು ಬ್ರೂನಿ ನಡುವಿನ ರಾಜತಾಂತ್ರಿಕ ಸಂಬಂಧಗಳು ಸ್ಥಾಪನೆಗೊಂಡು ೪೦ ವರ್ಷ ಪೂರ್ಣಗೊಂಡ ಸಂದರ್ಭದಲ್ಲಿ ಪ್ರಧಾನಿ ಭೇಟಿ ನೀಡುತ್ತಿದ್ದಾರೆ ಎಂದು ಅವರು ಹೇಳಿದರು. ತಮ್ಮ ಭೇಟಿಯ ಎರಡನೇ ಹಂತದಲ್ಲಿ, ಪ್ರಧಾನಿ ನರೇಂದ್ರ ಮೋದಿ, ಸಿಂಗಾಪುರದ ಪ್ರಧಾನಿ ಲಾರೆನ್ಸ್ ವಾಂಗ್ ಅವರ ಆಹ್ವಾನದ ಮೇರೆಗೆ ಬರುವ ಬುಧವಾರ ಸಿಂಗಾಪುರಕ್ಕೆ ಆಗಮಿಸಲಿದ್ದಾರೆ ಎಂದು ಜೈಸ್ವಾಲ್ ತಿಳಿಸಿದ್ದಾರೆ.

******

ಪ್ರಧಾನಿ ನರೇಂದ್ರ ಮೋದಿ ಅವರು, ಜಿಲ್ಲಾ ನ್ಯಾಯಾಲಯಗಳ ರಾಷ್ಟ್ರೀಯ ಸಮಾವೇಶಕ್ಕೆ ದೆಹಲಿಯಲ್ಲಿ ಇಂದು ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಸುಪ್ರೀಂಕೋರ್ಟ್‌ನ ೭೫ನೇ ಸಂಸ್ಥಾಪನಾ ದಿನಾಚರಣೆ ಸ್ಮರಣಾರ್ಥ ವಿಶೇಷ ಅಂಚೆಚೀಟಿ ಮತ್ತು ನಾಣ್ಯವನ್ನು ಬಿಡುಗಡೆ ಮಾಡಲಿದ್ದಾರೆ. ಸುಪ್ರೀಂಕೋರ್ಟ್ ಆಯೋಜಿಸಿರುವ ಎರಡು ದಿನಗಳ ಈ ಸಮಾವೇಶದಲ್ಲಿ ಜಿಲ್ಲಾ ನ್ಯಾಯಾಲಯಗಳ ಮೂಲಸೌಕರ್ಯ, ನ್ಯಾಯಾಂಗ ಭದ್ರತೆ, ನ್ಯಾಯಾಲಯದ ಕೊಠಡಿಗಳು, ಪ್ರಕರಣ ನಿರ್ವಹಣೆ ಮತ್ತು ತರಬೇತಿ ಸೇರಿದಂತೆ ಜಿಲ್ಲಾ ನ್ಯಾಯಾಂಗಕ್ಕೆ ಸೇರಿದ ವಿವಿಧ ವಿಚಾರಗಳ ಕುರಿತು ವಿಚಾರಗೋಷ್ಠಿ ನಡೆಯಲಿದೆ.

ಸಮಾವೇಶದಲ್ಲಿ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ, ಕೇಂದ್ರ ಕಾನೂನು ಮತ್ತು ನ್ಯಾಯಾಂಗ ಸಚಿವರು, ಅಟಾರ್ನಿ ಜನರಲ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

******

ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಎರಡು ದಿನಗಳ ಭೇಟಿಗಾಗಿ ಇಂದು ಉತ್ತರಾಖಂಡಕ್ಕೆ ತೆರಳಲಿದ್ದಾರೆ. ಭೇಟಿ ವೇಳೆ ಅವರು ಡೆಹ್ರಾಡೂನ್‌ನಲ್ಲಿ ಭಾರತೀಯ ಪೆಟ್ರೋಲಿಯಂ ಸಂಸ್ಥೆಯ ವಿಜ್ಞಾನಿಗಳು, ಬೋಧಕ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಬಳಿಕ ಅವರು, ಡೆಹ್ರಾಡೂನ್‌ನಲ್ಲಿರುವ ರಾಷ್ಟ್ರೀಯ ಮಿಲಿಟರಿ ಕಾಲೇಜು ಮತ್ತು ಹೃಷಿಕೇಶಿ ಏಮ್ಸ್ ಕಾಲೇಜಿಗೆ ಭೇಟಿ ನೀಡಲಿದ್ದಾರೆ.

******

ನೀರಿನಲ್ಲಿ ವಿಸರ್ಜನೆ ಮಾಡುವ ವಿಗ್ರಹಗಳನ್ನು ತಯಾರಿಸಲು ಪ್ಲಾಸ್ಟರ್ ಆಫ್ ಪ್ಯಾರಿಸ್ ಬಳಕೆಯನ್ನು ನಿಷೇಧಿಸುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಸರಿಸಲು ಎಲ್ಲಾ 'ಸಾರ್ವಜನಿಕ ಗಣೇಶ ಮಂಡಳಿ'ಗಳಿಗೆ ಸೂಚಿಸುವಂತೆ ಬಾಂಬೆ ಉಚ್ಚ ನ್ಯಾಯಾಲಯ ಮಹಾರಾಷ್ಟ್ರ ಸರ್ಕಾರಕ್ಕೆ ಸೂಚಿಸಿದೆ. ಮುಖ್ಯ ನ್ಯಾಯಮೂರ್ತಿ ಡಿ.ಕೆ. ಉಪಾಧ್ಯಾಯ ಮತ್ತು ನ್ಯಾಯಮೂರ್ತಿ ಅಮಿತ್ ಬೋರ್ಕರ್ ಅವರನ್ನೊಳಗೊಂಡ ವಿಭಾಗೀಯ ಪೀಠ, ಪಿಒಪಿ ವಿಗ್ರಹಗಳ ಮೇಲೆ ನಿಷೇಧ ಹೇರುವ, ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ೨೦೨೦ರ ಮೇ ನಲ್ಲಿ ಹೊರಡಿಸಿದ ಮಾರ್ಗಸೂಚಿಗಳನ್ನು ಅನುಸರಿಸಬೇಕು ಎಂದು ಹೇಳಿದೆ. ಈಗಾಗಲೇ ಅನುಮತಿ ನೀಡಲಾಗಿರುವ ಪ್ರಕರಣಗಳಲ್ಲಿ, ಪಿಒಪಿಯಿಂದ ಮಾಡಿದ ವಿಗ್ರಹಗಳನ್ನು ಸ್ಥಾಪಿಸಬಾರದು ಎಂಬ ಹೆಚ್ಚುವರಿ ಷರತ್ತನ್ನು ತಕ್ಷಣವೇ ಸೇರಿಸಬೇಕು ಎಂದು ಹೈಕೋರ್ಟ್ ನಿರ್ದೇಶಿಸಿದೆ.

******

ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತದ ಪರಿಣಾಮವಾಗಿ ಉಂಟಾಗಿರುವ ಅಸ್ನಾ ಚಂಡಮಾರುತದಿಂದ ಗುಜರಾತ್‌ನಲ್ಲಿ ಭಾರೀ ಮಳೆಯಾಗುತ್ತಿದ್ದು, ಮುಂದಿನ ಅವಧಿಯಲ್ಲಿ ಈಶಾನ್ಯ ಅರಬ್ಬಿ ಸಮುದ್ರದ ಮೇಲೆ, ಪಶ್ಚಿಮ-ವಾಯವ್ಯವಾಗಿ ಚಂಡಮಾರುತ ಚಲಿಸುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

ಕಳೆದ ೨೪ ಗಂಟೆಗಳಲ್ಲಿ ಗುಜರಾತ್‌ನ ಕಚ್ಛ್ ಪ್ರದೇಶಗಳಲ್ಲಿ ಭಾರೀ ಮಳೆಯಾಗಿದೆ. ಈ ನಡುವೆ, ಇಂದು ಕರಾವಳಿ ಕರ್ನಾಟಕ, ಒಡಿಶಾ, ಕರಾವಳಿ ಆಂಧ್ರಪ್ರದೇಶ, ಛತ್ತೀಸ್‌ಗಢ ಮತ್ತು ಯಾನಮ್‌ನಲ್ಲಿ ಭಾರಿ ಮಳೆಯಾಗಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಎರಡು ದಿನಗಳಲ್ಲಿ ಈಶಾನ್ಯ ಭಾರತ, ಉಪ-ಹಿಮಾಲಯನ್ ಪಶ್ಚಿಮ ಬಂಗಾಳ ಮತ್ತು ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ. ದಕ್ಷಿಣ ಮತ್ತು ಮಧ್ಯ ಭಾರತದಲ್ಲಿ, ಮುಂದಿನ ಏಳು ದಿನಗಳಲ್ಲಿ ತಮಿಳುನಾಡು, ಪುದುಚೇರಿ, ಲಕ್ಷದ್ವೀಪ ಮತ್ತು ಮಧ್ಯ ಮಹಾರಾಷ್ಟ್ರದ ಜೊತೆಗೆ ಕೊಂಕಣ, ಗೋವಾ, ಕೇರಳ ಮತ್ತು ಕರಾವಳಿ ಕರ್ನಾಟಕದಲ್ಲೂ ಭಾರೀ ವರ್ಷಧಾರೆಯಾಗಲಿದೆ. ಜಮ್ಮು, ಕಾಶ್ಮೀರ ಮತ್ತು ಲಡಾಖ್‌ನ ಕೆಲವು ಭಾಗಗಳಲ್ಲಿ ಭಾರೀ ಮಳೆ ಬೀಳಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

******

ಹಿಂದೂಮಹಾಸಾಗರ ಪ್ರದೇಶದಲ್ಲಿ ಭದ್ರತೆ ಹಾಗೂ ಸ್ಥಿರತೆಯನ್ನು ಕಾಪಾಡುವ ನಿಟ್ಟಿನಲ್ಲಿ ಕೊಲಂಬೊದಲ್ಲಿ ಕೊಲಂಬೊ ಸೆಕ್ಯುರಿಟಿ ಕಾನ್‌ಕ್ಲೇವ್ - ಸಿಎಸ್‌ಸಿ ಸೆಕ್ರೇಟರಿಯೇಟ್ ಸ್ಥಾಪನೆಗೆ ಭಾರತ, ಮಾಲ್ದೀವ್ಸ್, ಮಾರಿಷಸ್ ಹಾಗೂ ಶ್ರೀಲಂಕಾ ತಿಳಿವಳಿಕಾ ಒಪ್ಪಂದಕ್ಕೆ ಸಹಿ ಹಾಕಿವೆ. ಶ್ರೀಲಂಕಾ ಸರ್ಕಾರ ಕೊಲೊಂಬೋದಲ್ಲಿ ನಿನ್ನೆ ಆಯೋಜಿಸಿದ್ದ ಸಮಾರಂಭದಲ್ಲಿ ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಹಾಗೂ ಮಾಲ್ದೀವ್ಸ್, ಮಾರಿಷಸ್ ಮತ್ತು ಶ್ರೀಲಂಕಾದ ಪ್ರತಿನಿಧಿಗಳು ತಮ್ಮ ರಾಷ್ಟ್ರಗಳ ಪರವಾಗಿ ಈ ಒಪ್ಪಂದಕ್ಕೆ ಸಹಿ ಹಾಕಿದರು. ಸಮಾರಂಭದಲ್ಲಿ ಮಾತನಾಡಿದ ಅಜಿತ್ ದೋವಲ್, ಸಾಂಪ್ರದಾಯಿಕ, ಅಸಂಪ್ರದಾಯಿಕ ಮತ್ತು ಉದಯೋನ್ಮುಖ ಭದ್ರತಾ ಸವಾಲುಗಳನ್ನು ಎದುರಿಸುವಲ್ಲಿ ಕೊಲಂಬೊ ಸೆಕ್ಯುರಿಟಿ ಕೌನ್ಸಿಲ್‌ನ ಮಹತ್ವದ ಕುರಿತು ಒತ್ತಿ ಹೇಳಿದರು. ಇದೇ ವೇಳೆ ಅವರು, ವಿವಿಧ ಭದ್ರತಾ ವಲಯಗಳಾದ್ಯಂತ ಸುಸ್ಥಿರ ಪ್ರಾದೇಶಿಕ ಸಹಕಾರದ ಅಗತ್ಯತೆ ಕುರಿತು ಪ್ರಸ್ತಾಪಿಸಿದರು. ತಮ್ಮ ಶ್ರೀಲಂಕಾ ಪ್ರವಾಸದ ವೇಳೆ ಅಜಿತ್ ದೋವಲ್, ಶ್ರೀಲಂಕಾ ಅಧ್ಯಕ್ಷ ರನಿಲ್ ವಿಕ್ರಮ ಸಿಂಘೆ, ಪ್ರಧಾನಿ ದಿನೇಶ್ ಗುಣವರ್ಧನ ಅವರನ್ನು ಭೇಟಿ ಮಾಡಿ, ಮಾತುಕತೆ ನಡೆಸಿದರು.

******

ಬ್ರೆಜಿಲ್‌ನಲ್ಲಿ ಕಾನೂನು ಪ್ರತಿನಿಧಿಯನ್ನು ನೇಮಕ ಮಾಡಲು ನಿರಾಕರಿಸಿದ ಹಿನ್ನೆಲೆಯಲ್ಲಿ ಸಾಮಾಜಿಕ ಮಾಧ್ಯಮವಾದ ಎಕ್ಸ್ ಅನ್ನು ನಿಷೇಧಿಸಿ, ಬ್ರೆಜಿಲ್ ಸರ್ವೋಚ್ಛ ನ್ಯಾಯಾಲಯ ಆದೇಶ ಹೊರಡಿಸಿದೆ. ಇದಕ್ಕೂ ಮುನ್ನ ನ್ಯಾಯಮೂರ್ತಿ ಅಲೆಗ್ಸಾಂಡರ್ ಡೆ ಮೊರಾಯ್ಸ್, ಎಕ್ಸ್‌ನ ಮುಖ್ಯಸ್ಥ ಎಲಾನ್ ಮಸ್ಕ್‌ಗೆ, ಕಾನೂನು ಪ್ರತಿನಿಧಿಯನ್ನು ನೇಮಿಸಲು ವಿಫಲವಾದಲ್ಲಿ ಬ್ರೆಜಿಲ್‌ನಲ್ಲಿ ಎಕ್ಸ್‌ನ ಕಾರ್ಯನಿರ್ವಹಣೆಗೆ ತಡೆ ತರಲಾಗುವುದು ಎಂದು ಎಚ್ಚರಿಕೆ ನೀಡಿದ್ದರು. ಆದೇಶ ಹೊರಡಿಸಿದ ಬಳಿಕ ಅಲೆಗ್ಸಾಂಡರ್ ಡೆ ಮೊರಾಯ್ಸ್, ಸಾಮಾಜಿಕ ಮಾಧ್ಯಮವಾದ ಎಕ್ಸ್, ನಿಯಮ ಪಾಲಿಸುವವರೆಗೂ ಈ ಆದೇಶ ಜಾರಿಯಲ್ಲಿರಲಿದೆ ಎಂದು ತಿಳಿಸಿದ್ದಾರೆ.

******

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟದಲ್ಲಿ, ೩ನೇ ದಿನವಾದ ಇಂದು, ಭಾರತದ ಶೂಟರ್‌ಗಳ ಮೇಲೆ ಪದಕದ ನಿರೀಕ್ಷೆ ಹೆಚ್ಚಿದೆ. ಪ್ಯಾರಾ ಷಟ್ಲರ್‌ಗಳು ಮತ್ತು ಬಿಲ್ಲುಗಾರರು ಕೂಡ ಸ್ಪರ್ಧಿಸಲಿದ್ದಾರೆ. ಶೂಟಿಂಗ್‌ನಲ್ಲಿ, ಪುರುಷರ ೧೦ ಮೀಟರ್ ಏರ್ ರೈಫಲ್ ಸ್ಟ್ಯಾಂಡಿಂಗ್ ಎಸ್‌ಎಚ್- ೧ ರ ಅರ್ಹತಾ ಸುತ್ತಿನಲ್ಲಿ, ಸ್ವರೂಪ್ ಮಹಾವೀರ್ ಉನ್ಹಾಲ್ಕರ್ ಸ್ಪರ್ಧಿಸಲಿದ್ದರೆ, ಇಂದು ಮಧ್ಯಾಹ್ನ, ರುಬಿನಾ ಫ್ರಾನ್ಸಿಸ್, ಮಹಿಳೆಯರ ೧೦ ಮೀ ಏರ್ ಪಿಸ್ತೂಲ್ ಎಸ್‌ಹೆಚ್- ೧ ನಲ್ಲಿ ಅರ್ಹತೆಗಾಗಿ ಸ್ಪರ್ಧಿಸಲಿದ್ದಾರೆ. ಜಾವೆಲಿನ್ ಥ್ರೋ ಅಥ್ಲೆಟಿಕ್ಸ್‌ನಲ್ಲಿ, ಪರ್ವೀನ್ ಕುಮಾರ್ ಇಂದು ರಾತ್ರಿ ನಡೆಯಲಿರುವ ಎಫ್-೫೭ ಫೈನಲ್ ಸ್ಪರ್ಧೆಯಲ್ಲಿ ಭಾಗಿಯಾಗಲಿದ್ದಾರೆ. ಕ್ರೀಡಾಕೂಟದ ೨ನೇ ದಿನವಾದ ನಿನ್ನೆ, ಭಾರತ ನಾಲ್ಕು ಪದಕಗಳನ್ನು ತನ್ನದಾಗಿಸಿಕೊಂಡಿತು. ಶೂಟರ್‌ಗಳು ರಾಷ್ಟ್ರಕ್ಕೆ ಮೂರು ಪದಕಗಳನ್ನು ಖಚಿತಪಡಿಸಿದರೆ, ಅಥ್ಲೆಟಿಕ್ಸ್‌ನಲ್ಲಿ ಒಬ್ಬರು ಜಯಶಾಲಿಯಾದರು. ಮಹಿಳೆಯರ ೧೦ ಮೀಟರ್ ಏರ್ ರೈಫಲ್ ಎಸ್‌ಎಚ್-೧ ಸ್ಪರ್ಧೆಯಲ್ಲಿ ಶೂಟರ್ ಅವನಿ ಲೇಖಾರ, ಸತತ ಎರಡನೇ ಪ್ಯಾರಾಲಿಂಪಿಕ್ಸ್ ಚಿನ್ನ ಗೆದ್ದರೆ, ಮೋನಾ ಅಗರ್ವಾಲ್ ಕಂಚಿನ ಪದಕ ಪಡೆದರು. ಪುರುಷರ ೧೦ ಮೀಟರ್ ಏರ್ ಪಿಸ್ತೂಲ್ ಎಸ್‌ಎಚ್-೧ ವಿಭಾಗದಲ್ಲಿ ಮನೀಶ್ ನರ್ವಾಲ್ ಬೆಳ್ಳಿ ಪದಕಕ್ಕೆ ಕೊರಳೊಡ್ಡಿದರು. ಇದಲ್ಲದೆ, ಅಥ್ಲೆಟಿಕ್ಸ್‌ನಲ್ಲಿ, ಸ್ಪ್ರಿಂಟರ್ ಪ್ರೀತಿಪಾಲ್ ಭಾರತಕ್ಕೆ ಮತ್ತೊಂದು ಪದಕವನ್ನು ಖಚಿತಪಡಿಸಿದರು. ಮಹಿಳೆಯರ ೧೦೦ಮೀಟರ್, ಟಿ-೩೫ ಫೈನಲ್‌ನಲ್ಲಿ ಕಂಚಿನ ಪದಕ ಪಡೆದ ಅವರು, ಪ್ಯಾರಾ ಗೇಮ್ಸ್‌ನಲ್ಲಿ ಭಾರತಕ್ಕೆ ಪದಕ ಗೆದ್ದ ಮೊದಲ ಓಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

ಬ್ಯಾಡ್ಮಿಂಟನ್‌ನ ಗುಂಪು ಹಂತದ ಪಂದ್ಯದಲ್ಲಿ ಶಿವರಾಜನ್ ಸೋಲೈಮಲೈ ಮತ್ತು ನಿತ್ಯಾಶ್ರೀ ಶಿವನ್ ಮಿಶ್ರ ಜೋಡಿ, ಥಾಯ್ಲೆಂಡ್‌ನ ನತ್ತಪಾಂಗ್ ಮೀಚೈ ಮತ್ತು ಚಾಯ್ ಸಯಾಂಗ್ ಜೋಡಿ ವಿರುದ್ಧ ೨೧-೭, ೨೧-೧೭ ಅಂತರದ ಗೆಲುವು ತಮ್ಮದಾಗಿಸಿಕೊಂಡರು. ಈ ಗೆಲುವಿನೊಂದಿಗೆ ಭಾರತದ ಈ ಜೋಡಿ, ಗುಂಪಿನಲ್ಲಿ ಅಗ್ರಸ್ಥಾನ ಪಡೆದು, ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದೆ. ಇಂದು ಸಂಜೆ ಸೆಮಿಫೈನಲ್ ಪಂದ್ಯ ನಡೆಯಲಿದೆ.

******

ಪ್ಯಾರಾಲಿಂಪಿಕ್ಸ್‌ನಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ಅಭಿನಂದನೆ ಸಲ್ಲಿಸಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಅವನಿ ಲೇಖಾರ ಅವರ ಮೂರನೇ ಪದಕ ಹಾಗೂ ಸತತ ಎರಡನೇ ಚಿನ್ನದ ಪದಕ ಇದಾಗಿದೆ. ಅವರ ಈ ಐತಿಹಾಸಿಕ ಮತ್ತು ಅಸಾಮಾನ್ಯ ಸಾಧನೆ ಕುರಿತು ದೇಶಕ್ಕೆ ಹೆಮ್ಮೆಯಿದೆ. ಅವರ ಕ್ಷಮತೆ ಹಾಗೂ ಬದ್ಧತೆ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಇದೇ ವೇಳೆ ಅವರು ಬೆಳ್ಳಿಪದಕ ವಿಜೇತ ಮನೀಶ್ ನರ್ವಾಲ್ ಮತ್ತು ಕಂಚಿನ ಪದಕ ವಿಜೇತ ಪ್ರೀತಿ ಪಾಲ್ ಅವರನ್ನು ಅಭಿನಂದಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ಕೂಡ ಪದಕ ವಿಜೇತರಿಗೆ ಅಭಿನಂದನೆ ಸಲ್ಲಿಸಿದ್ದು, ಅವನಿ ಲೇಖಾರ ಅವರು, ಒಟ್ಟು ಮೂರು ಪ್ಯಾರಾಲಿಂಪಿಕ್ ಪದಕಗಳನ್ನು ಗೆಲ್ಲುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ ಎಂದು ತಮ್ಮ ಸಂದೇಶದಲ್ಲಿ ಶ್ಲಾಘಿಸಿದ್ದಾರೆ.

******

ಪೆರುವಿನ ಲಿಮಾದಲ್ಲಿ ನಡೆದ ವಿಶ್ವ ಅಂಡರ್-೨೦ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನ ಮಹಿಳೆಯರ ೧೦ ಸಾವಿರ ಮೀಟರ್ ವೇಗದ ನಡಿಗೆ ಸ್ಪರ್ಧೆಯಲ್ಲಿ ಭಾರತದ ಆರತಿ, ನಿನ್ನೆ ರಾಷ್ಟ್ರೀಯ ದಾಖಲೆಯೊಂದಿಗೆ ಕಂಚಿನ ಪದಕ ಗೆದ್ದರು. ಸ್ಪರ್ಧೆಗಳ ಅಂತಿಮ ದಿನದಂದು ಆರತಿ, ೪೪ ನಿಮಿಷ ೩೯.೩೯ ಸೆಕೆಂಡ್‌ಗಳಲ್ಲಿ ಮೂರನೇ ಸ್ಥಾನ ಗಳಿಸಿದರು.

******